ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ : 07 ನೇ ಡಿಸೆಂಬರ್, 2020

ಕೇಂದ್ರ ಸರ್ಕಾರ ಘೋಷಿಸಿದ ``ರಾಷ್ಟ್ರೀಯ ಶಿಕ್ಷಣ ನೀತಿ'' ಬಗ್ಗೆ

ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

07 (60+62) ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಕೇಂದ್ರ ಸರ್ಕಾರ ಘೋಷಣೆ ಮಾಡಿರುವ ಶಿಕ್ಷಣಕ್ಕೆ ಸಂಬಂಧಿಸಿದ ರಾಷ್ಟ್ರೀಯ ಶಿಕ್ಷಣ ನೀತಿಯನ್ನು ರಾಜ್ಯ ಸರ್ಕಾರದ ವತಿಯಿಂದ ಜಾರಿಗೆ ತರಲಾಗಿದೆಯೇ;

(ಆ) ದೇಶದ ಶಿಕ್ಷಣ ವ್ಯವಸ್ಥೆಯನ್ನು ಬದಲಿಸುವ ಈ ಯೋಜನೆಯನ್ನು ಸರ್ಕಾರ ಯಾವ ರೀತಿಯಲ್ಲಿ ಅನುಷ್ಠಾನಗೊಳಿಸಲು ಉದ್ದೇಶಿಸಿದೆ;

(ಇ) ಸದರಿ ಯೋಜನೆಯನ್ನು ಅನುಷ್ಠಾನಗೊಳಿಸಲು ಎಷ್ಟು ಹಣವನ್ನು ಮೀಸಲಿಡಲಾಗಿದೆ ಹಾಗೂ ಯಾವ ಕಾಲಮಿತಿಯಲ್ಲಿ ಇದನ್ನು ಪೂರ್ಣಗೊಳಿಸಲಾಗುವುದು;

(ಈ) ಸದರಿ ಯೋಜನೆಯು ಪ್ರಾಥಮಿಕ ಶಿಕ್ಷಣ ಮತ್ತು ಗ್ರಾಮೀಣ ಮತ್ತು ನಗರ ಭಾಗಗಳಲ್ಲಿ ವೃತ್ತಿಪರ ಶಿಕ್ಷಣಕ್ಕೆ ಅನುಕೂಲ ಮಾಡಿಕೊಡಲಿದ್ದು, ಇದನ್ನು ಜಾರಿಗೆ ತರುವ ಬಗ್ಗೆ ಸರ್ಕಾರ ಯಾವ ರೀತಿ ರೂಪುರೇಷೆಗಳನ್ನು ಹಮ್ಮಿಕೊಂಡಿದೆ;

(ಉ) ಕೇಂದ್ರ ಸರ್ಕಾರದ ಹೊಸ ಶಿಕ್ಷಣ ನೀತಿಯಲ್ಲಿ ಮಾತೃ ಭಾಷೆಗೆ ಹೆಚ್ಚು ಮಹತ್ವ ಕೊಡಲು ನಿರ್ದೇಶಿಸಲಾಗಿದ್ದು, ಸರ್ಕಾರ ಇದನ್ನು ಯಾವ ರೀತಿಯಲ್ಲಿ ಅನುಷ್ಠಾನಗೊಳಿಸಲಿದೆ?